## ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಸೇಡಂ.

## ಸಿಸಿ ನಂ.1180/2021

ಫಿರ್ಯಾದಿಃ ಕರ್ನಾಟಕ ಸರಕಾರ ಪರಃ ಸೇಡಂ ಪೊಲೀಸ್ ಠಾಣೆ

-ಃಃ ವಿರುದ್ಧ ಃಃ-

ಆರೋಪಿ ಃ ಅಂಬ್ರೀಶ ತಂದೆ ಬಸವರಾಜ ಹಿರೇಮಠ
ವಃ 35 ವರ್ಷ, ಉಃ ವ್ಯಾಪಾರ,
ಸಾಃ ಬಟಗೇರಾ (ಕೆ) ಗ್ರಾಮ,
ತಾಃ ಸೇಡಂ

----

## ದೋಷಾರೋಪಣೆ

ನಾನು ಶ್ರೀ ಬಾಲು, ಬಿ.ಎ.,ಎಲ್‌ಎಲ್‌ಬಿ., ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರು, ಸೇಡಂ, ನಿಮ್ಮ ಮೇಲೆ ಹೊರಿಸುವ ಆರೋಪವೇನೆಂದರೆ,

ದಿನಾಂಕ 07-01-2021 ರಂದು ರಾತ್ರಿ 08.35 ಗಂಟೆ ಸುಮಾರಿಗೆ ಸೇಡಂ ಪೋಲಿಸ ಠಾಣಾ ವ್ಯಾಪ್ತಿಯಲ್ಲಿ ಬರುವ ಬಟಗೇರಾ (ಕೆ) ಗೇಟದಿಂದ ಬಟಗೇರಾ (ಕೆ ) ಗ್ರಾಮದೊಳಗೆ ಹೋಗುವ ಮುಖ್ಯ ರಸ್ತೆಯಲ್ಲಿ ಸೋಮಣ್ಣಾ ಸೌಕಾರ ಇವರ ಮನೆಯ ಹತ್ತಿರ ಚಾಸಾ 1 ನೇದ್ದವನು ಕಂಪನಿಯಲ್ಲಿ ಕೆಲಸ ಮುಗಿಸಿಕೊಂಡು ತನ್ನ ಮನೆಗೆ ಹೋಗುವಾಗ ಆರೋಪಿ 1 ನೆದ್ದವನು ದಾರಿಯಲ್ಲಿ ಚಾಸ ನಂ 1 ನೆದ್ದವನ ಮೋಟಾರ ಸೈಕಲ ಎದುರುಗಡೆ ರಸ್ತೆಯಲ್ಲಿ ಅಡ್ಡಗಟ್ಟಿ ತಡೆದು ನಿಲ್ಲಿಸಿದ್ದು ಆ ಮೂಲಕ ಆರೋಪಿತರಾದ ನೀವು ಭಾ.ದಂ.ಸಂ. 341 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧಗಳನ್ನು ಮಾಡಿರುತ್ತೀರಿ, ಅದು ನನ್ನ ಸಂಜ್ಞೆತೆಗೆ ಬಂದಿರುತ್ತದೆ.

ಎರಡನೆಯದಾಗಿ ಮೇಲೆ ಹೇಳಲಾದ ದಿನ, ಸಮಯ ಮತ್ತು ಸ್ಥಳದಲ್ಲಿ ಆರೋಪಿತನಾದ ನೀನು ಚಾಸಾ 1 ರವರನ್ನು ತಡೆದು ನಿಲ್ಲಿಸಿ ಅವಾಚ್ಯ ಶಬ್ದಗಳಿಂದ ಬೈದು ಮೊನ್ನೆ ನಡೆದ ಗ್ರಾಮ ಪಂಚಾಯತ ಚುನಾವಣೆಯಲ್ಲಿ ನಮ್ಮ ತಾಯಿ ನಿನ್ನಿಂದಲೆ ಸೋತಿದ್ದಾಳೆ ಅಂತಾ ಜಗಳ ತೆಗೆದು ಚಾಸಾ 1 ನೆದ್ದವರಿಗೆ ಕುಸ್ತಿಗೆ ಬಿದ್ದು ಮೈ ಮೇಲಿದ್ದ ಅಂಗಿ ಹಿಡಿದು ಎಳೆದಾಡಿ ಕೈಯಿಂದ ಚಾಸಾ 1 ನೆದ್ದವರಿಗೆ ಎಡ ಕಪಾಳಕ್ಕೆ ದವಡೆಗೆ ಎಡಗಡೆ ತಲೆಗೆ ಮತ್ತು ಬಲಗಡೆ ಎದೆಗೆ ಗುದ್ದಿ ಗುಪ್ತಗಾಯ ಪಡಿಸಿದ್ದು ಆಗ ಚಾಸಾ 4 ಮತ್ತು 5 ನೆದ್ದವರು ಆರೋಪಿತನಿಗೆ ಬಿಡಿಸಿ ಕಳಿಸಿದ್ದು ಆ ಮೂಲಕ ಆರೋಪಿತರಾದ ನೀವು ಭಾ.ದಂ.ಸಂ. 323 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧಗಳನ್ನು ಮಾಡಿರುತ್ತೀರಿ, ಅದು ನನ್ನ ಸಂಜ್ಞೆತೆಗೆ ಬಂದಿರುತ್ತದೆ.

ಮೂರನೆಯದಾಗಿ ಮೇಲೆ ಹೇಳಲಾದ ದಿನ, ಸಮಯ ಮತ್ತು ಸ್ಥಳದಲ್ಲಿ ಆರೋಪಿತನಾದ ನೀನು ಚಾಸಾ 1 ರವರನ್ನು ತಡೆದು ನಿಲ್ಲಿಸಿ ಭೋಸಡಿ ಮಗನೆ ನಾಗ್ಯಾ ನಿಲ್ಲು ಎಲ್ಲಿಗೆ ಹೋಗುತಿದ್ದಿ ನೀನು ಮಂದಿದ್ದು ತಿಂದು ಬದುಕುವ ಸೂಳಿ ಮಗನೆ ಅಂತಾ ಅವಾಚ್ಯ ಶಬ್ದಗಳಿಂದ ಬೈದು ಸಾರ್ವಜನಿಕ

ಶಾಂತತೆಗೆ ಭಂಗ ಉಂಟು ಮಾಡಿದ್ದು ಆ ಮೂಲಕ ಆರೋಪಿತರಾದ ನೀವು ಭಾ.ದಂ.ಸಂ. 504 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧಗಳನ್ನು ಮಾಡಿರುತ್ತೀರಿ, ಅದು ನನ್ನ ಸಂಜ್ಞೆತೆಗೆ ಬಂದಿರುತ್ತದೆ.

ಕೊನೆಯದಾಗಿ ಮೇಲೆ ಹೇಳಲಾದ ದಿನ, ಸಮಯ ಮತ್ತು ಸ್ಥಳದಲ್ಲಿ ಆರೋಪಿತನು ಚಾಸಾ ನಂ 1 ನೆದ್ದವರಿಗೆ ಜಗಳ ತೆಗೆದು, ಜಗಳ ಬಿಟ್ಟು ಹೋಗುವಾಗ ಆರೋಪಿತನು ಚಾಸಾ 1 ನೆದ್ದವನಿಗೆ ಭೋಸಡಿ ಮಗನೆ ಇವತ್ತು ಉಳಿದುಕೊಂಡಿದ್ದಿ ಇನ್ನೊಮ್ಮೆ ನನ್ನ ಕೈಯಲ್ಲಿ ಸಿಗು ನಿನಗೆ ಜೀವಂತ ಬಿಡುವುದಿಲ್ಲಾ ಹೊಡೆದು ಕೊಲೆ ಮಾಡುತ್ತೇನೆ ಅಂತಾ ಜೀವದ ಭೆದರಿಕೆ ಹಾಕಿದ್ದು ಆ ಮೂಲಕ ಆರೋಪಿತರಾದ ನೀವು ಭಾ.ದಂ.ಸಂ.506 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧಗಳನ್ನು ಮಾಡಿರುತ್ತೀರಿ, ಅದು ನನ್ನ ಸಂಜ್ಞೆತೆಗೆ ಬಂದಿರುತ್ತದೆ.

ಕಾರಣ ಮೇಲೆ ಹೇಳಿದ ಅಪರಾಧಗಳಿಗಾಗಿ ವಿಚಾರಣೆ ಎದುರಿಸಬೇಕೆಂದು ನಿರ್ದೇಶಿಸುತ್ತಿದ್ದೇನೆ.

ಸಹಿ/-

ದಿನಾಂಕಃ 08-11-2024 ಪ್ರ.ದ.ನ್ಯಾದಂ. ಸೇಡಂ.

## ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಸೇಡಂ.

**ಸಿಸಿ ನಂ.1180/2021**

ಫಿರ್ಯಾದಿಃ ಕರ್ನಾಟಕ ಸರಕಾರ ಪರಃ ಸೇಡಂ ಪೊಲೀಸ್ ಠಾಣೆ

-ಃಃ ವಿರುದ್ಧ ಃಃ-

ಆರೋಪಿ ಃ ಅಂಬ್ರೀಶ ತಂದೆ ಬಸವರಾಜ ಹಿರೇಮಠ
ವಃ 35 ವರ್ಷ, ಉಃ ವ್ಯಾಪಾರ,
ಸಾಃ ಬಟಗೇರಾ (ಕೆ) ಗ್ರಾಮ,
ತಾಃ ಸೇಡಂ

**ಆರೋಪಿತರ ಹೇಳಿಕೆ**

ಪ್ರಃ-1) ಈ ಓದಿ ಹೇಳಲಾದ ದೋಷಾರೋಪಣೆಯನ್ನು ಕೇಳಿ ತಿಳಿದುಕೊಂಡಿರುವಿರಾ?

ಉಃ

ಪ್ರಃ-2) ನಿನ್ನ ತಪ್ಪನ್ನು ಒಪ್ಪಿಕೊಳ್ಳುತ್ತಿಯೋ ಅಥವಾ ವಿಚಾರಣೆ ನಡೆಯಬೇಕಾ?

ಉಃ

(ದೋಷಾರೋಪಣೆಯನ್ನು ಆರೋಪಿತರಿಗೆ ಓದಿ ಹೇಳಿದ್ದು, ಅವರು ನೀಡಿದ ಹೇಳಿಕೆಯನ್ನು ಯಥಾವತ್ತಾಗಿ ದಾಖಲಿಸಿದ್ದು, ಅದು ಸಂಪೂರ್ಣ ಸತ್ಯವಾಗಿರುತ್ತದೆಂದು ಪ್ರಮಾಣೀಕರಿಸುತ್ತೇನೆ)

ಸಹಿ/-

ದಿನಾಂಕ 08-11-2024 ಪ್ರ.ದ.ನ್ಯಾದಂ. ಸೇಡಂ.